ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1206 (1472)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

ವಿಷಯ : ಅನುಸೂಚಿತ ಜಾತಿ/ಪಂಗಡ ಕಲ್ಯಾಣಕ್ಕಾಗಿರುವ ಯೋಜನೆ ಕುರಿತು

(ಅ) ರಾಜ್ಯದಲ್ಲಿ ಅನುಸೂಚಿತ ಜಾತಿ ಹಾಗೂ ಅನುಸೂಚಿತ ಪಂಗಡದ ಕಲ್ಯಾಣಕ್ಕಾಗಿರುವ ಯೋಜನೆಯನ್ನು ಯಾವಾಗ ಆರಂಭಿಸಲಾಯಿತು ;

(ಆ) ಈ ಕಾರ್ಯಕ್ರಮದ ಅನುಷ್ಠಾನಕ್ಕಿರುವ ಮಾನದಂಡಗಳೇನು ;

(ಇ) ಕರ್ನಾಟಕದಲ್ಲಿ ಯಾವ ವರ್ಷದಿಂದ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆ ಜಾರಿಗೆ ತರಲಾಯಿತು ; ಕಳೆದ ನಾಲ್ಕು ವರ್ಷಗಳ ಅವಧಿಯಲ್ಲಿ ವಿವಿಧ ಯೋಜನೆಗಳ ಅಭಿವೃದ್ಧಿ ಕಾರ್ಯಗಳಿಗಾಗಿ ಹಂಚಿಕೆ ಮಾಡಲಾದ ಹಣವೆಷ್ಟು ; (ವಿವರ ಒದಗಿಸುವುದು)

(ಈ) ಈ ಯೋಜನೆಯಡಿಯಲ್ಲಿ ಒಂದೇ ಕಾಮಗಾರಿ ಪುನರಾವರ್ತನೆ ಆಗದಂತೆ ನೋಡಿಕೊಳ್ಳಲು ಇರುವ ನಿಯಮಗಳೇನು ;

(ಉ) ಈ ಯೋಜನೆಗೆ ಹಂಚಿಕೆಯಾದ ಹಣವನ್ನು ನಿರ್ಧಿಷ್ಟ ಉದ್ದೇಶಕ್ಕೆ ಬಳಸದೇ ಶಿಕ್ಷಣದಂತಹ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಇದರ ಬಳಕೆ ಮಾಡುವುದು ಸರಿಯೇ ; ಈ ಬಗ್ಗೆ ಸರ್ಕಾರದ ನಿಲುವೇನು?